National
Kannada
25.04.2025: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು :

1. ಪೋಪ್ ಫ್ರಾನ್ಸಿಸ್ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ರಾಷ್ಟ್ರಪತಿ ದ್ರೌಪದಿ ಮುರ್ಮು ವ್ಯಾಟಿಕನ್‌ಸಿಟಿಗೆ ಇಂದು ಪ್ರಯಾಣ
2. ಪಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆ; ಭದ್ರತಾ ಪರಿಸ್ಥಿತಿ ಪರಾಮರ್ಶೆಗಾಗಿ ಶ್ರೀನಗರಕ್ಕೆ ಭೇಟಿ ನೀಡಿದ ಸೇನಾ ಮುಖ್ಯಸ್ಥ ಉಪೇಂದ್ರ ದ್ವಿವೇದಿ
3. ಮಾನನಷ್ಟ ಮೊಕದ್ದಮೆ ಪ್ರಕರಣ ಸಂಬಂಧ ದೆಹಲಿ ಪೊಲೀಸರಿಂದ ಪರಿಸರವಾದಿ ಮೇಧಾ ಪಾಟ್ಕರ್ ಬಂಧನ
4. ಇಂದು ಮಲೇರಿಯಾ ದಿನ; ರೋಗನಿಯಂತ್ರಣಕ್ಕೆ ವಿಶ್ವದೆಲ್ಲೆಡೆ ಜನ ಜಾಗೃತಿ ಕಾರ್ಯಕ್ರಮ
5. ಐಪಿಎಲ್ ಟಿ-೨೦ ಕ್ರಿಕೆಟ್: ಚೆನ್ನೈನಲ್ಲಿಂದು ಚೆನ್ನೈ ಸೂಪರ್ ಕಿಂಗ್ಸ್ -ಸನ್‌ರೈಸರ್ಸ್ ಹೈದರಾಬಾದ್ ತಂಡಗಳ ಮುಖಾಮುಖಿ

*******

ಕ್ಯಾಥೋಲಿಕ್ ಧರ್ಮ ಗುರು ಪೊಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸುವ ಸಲುವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ವ್ಯಾಟಿಕನ್ ಸಿಟಿಗೆ ಎರಡು ದಿನಗಳ ಭೇಟಿಗಾಗಿ ಇಂದು ಬೆಳಗ್ಗೆ ನವದೆಹಲಿಯಿಂದ ಪ್ರಯಾಣ ಬೆಳೆಸಿದರು. ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಅಲ್ಪಸಂಖ್ಯಾತರ ವ್ಯವಹಾರಗಳ ಖಾತೆ ರಾಜ್ಯ ಸಚಿವ ಜಾರ್ಜ್ ಕುರಿಯನ್, ಗೋವಾ ವಿಧಾನಸಭೆಯ ಉಪಸಭಾಧ್ಯಕ್ಷ ಜೋಶುವಾ ಡಿ ಸೋಜಾ ಅವರೊಂದಿಗೆ ಪ್ರಯಾಣ ಬೆಳೆಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು, ಭಾರತದ ಸರ್ಕಾರ ಮತ್ತು ಜನರ ಪರವಾಗಿ ಶ್ರದ್ಧಾಂಜಲಿ ಸಲ್ಲಿಸಲಿದ್ದಾರೆ. ರಾಷ್ಟ್ರಪತಿ ಇಂದು ಸೆಂಟ್ ಪೀಟರ್‌ನಲ್ಲಿರುವ ಬೆಸಿಲಿಕಾದಲ್ಲಿ ಇಡಲಾಗಿರುವ ಪೋಪ್ ಫ್ರಾನ್ಸಿಸ್ ಅವರ ಪಾರ್ಥಿವ ಶರೀರದ ಮೇಲೆ ಪುಷ್ಪಗುಚ್ಛ ಇರಿಸಿ ಗೌರವ ನಮನ ಸಲ್ಲಿಸಲಿದ್ದಾರೆ. ನಾಳೆ ನಡೆಯಲಿರುವ ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆಯಲ್ಲಿ ರಾಷ್ಟ್ರಪತಿ ಸೇರಿದಂತೆ ವಿಶ್ವದ ಹಲವಾರು ಗಣ್ಯರು ಭಾಗವಹಿಸಲಿದ್ದಾರೆ. ಪೋಪ್ ಫ್ರಾನ್ಸಿಸ್ ಅವರ ಈ ತಿಂಗಳ ೨೧ ರಂದು ನಿಧನರಾದರು. ಪೋಪ್ ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದಾರೆ. ಭಾರತದ ಪ್ರಜೆಗಳ ಬಗ್ಗೆ ಪೋಪ್ ಅವರು ತೋರುತ್ತಿದ್ದ ಪ್ರೀತಿ ವಿಶ್ವಾಸ ಎಂದಿಗೂ

ಸ್ಮರಣೀಯವಾಗಿರುತ್ತದೆ ಎಂದು ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ. ಪೋಪ್ ಅವರ ಗೌರವಾರ್ಥ ಭಾರತದಲ್ಲಿ ಮೂರು ದಿನಗಳ ಶೋಕಾಚರಣೆ ಘೋಷಿಸಲಾಗಿದೆ.

*******

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಭದ್ರತಾ ಪರಿಸ್ಥಿತಿಯ ಪರಾಮರ್ಶೆಗಾಗಿ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ಇಂದು ಬೆಳಗ್ಗೆ ಜಮ್ಮು ಮತ್ತು ಕಾಶ್ಮೀರದ ಶ್ರೀನಗರಕ್ಕೆ ತಲುಪಿದ್ದಾರೆ. ಅವರು, ದಕ್ಷಿಣ ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯ ಬೈಸರನ್ ಅರಣ್ಯ ಗ್ರಾಮದಲ್ಲಿ ನಡೆದ  ಪಹಲ್ಗಾಮ್ ಭಯೋತ್ಪಾದಕ ದಾಳಿ ನಡೆದ ಸ್ಥಳಕ್ಕೆ ಭೇಟಿ ನೀಡುವ ಸಾಧ್ಯತೆಗಳಿವೆ. ಸೇನಾ ಮುಖ್ಯಸ್ಥರು ಈ ಪ್ರದೇಶದ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕಣಿವೆಯಲ್ಲಿ ಮತ್ತು ನಿಯಂತ್ರಣ ರೇಖೆಯ ಉದ್ದಕ್ಕೂ ಸೇನೆ ತೆಗೆದುಕೊಂಡಿರುವ ಭಯೋತ್ಪಾದಕ ನಿಗ್ರಹ ಕ್ರಮಗಳ ಕುರಿತು ಸ್ಥಳೀಯ ಮಿಲಿಟರಿ ರಚನೆಗಳ ಉನ್ನತ ಕಮಾಂಡರ್‌ಗಳು ಸೇನಾ ಮುಖ್ಯಸ್ಥರಿಗೆ ವಿವರಿಸಲಿದ್ದಾರೆ. ಈ ಸಂದರ್ಭದಲ್ಲಿ ೧೫ ಕಾರ್ಪ್ಸ್ ಕಮಾಂಡರ್ ಮತ್ತು ಇತರ ರಾಷ್ಟ್ರೀಯ ರೈಫಲ್ ಫಾರ್ಮೇಷನ್ ಕಮಾಂಡರ್‌ಗಳು ಉಪಸ್ಥಿತರಿರುತ್ತಾರೆ. ಈ ನಡುವೆ ಉತ್ತರ ಕಾಶ್ಮೀರದ ಕುಪ್ವಾರ ಜಿಲ್ಲೆಯ ಗಡಿ ನಿಯಂತ್ರಣ ರೇಖೆಯ ನೌಗಾಮ್ ಪ್ರದೇಶದ ಹಲವೆಡೆ ಪಾಕಿಸ್ತಾನದ ಸೇನೆಯಿಂದ ಕದನ ವಿರಾಮ ಉಲ್ಲಂಘಿಸಿದ ಘಟನೆಗಳು ವರದಿಯಾಗಿವೆ.

*******

ಪಹಲ್ಗಾಮ್ ಭಯೋತ್ಪಾದಕ ದಾಳಿ ನಂತರ ಪಾಕಿಸ್ತಾನದ ವಿರುದ್ಧ ಭದ್ರತೆ ಕುರಿತ ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡಿರುವ ಕ್ರಮಗಳಿಗೆ ಸರ್ವಪಕ್ಷಗಳು ಪಕ್ಷ ಭೇದ ಮರೆತು ತಮ್ಮ ಬೆಂಬಲವನ್ನು ಸೂಚಿಸಿವೆ. ಭಯೋತ್ಪಾದನೆ ನಿಗ್ರಹ ಹೋರಾಟಕ್ಕೆ ಸರ್ವಪಕ್ಷಗಳು ಸರ್ಕಾರಕ್ಕೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿವೆ. ಪಹಲ್ಗಾಮ್ ಭಯೋತ್ಪಾಕ ದಾಳಿ ನಂತರ ಮುಂದೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲು ಕೇಂದ್ರ ಸರ್ಕಾರ ನಿನ್ನೆ ನವದೆಹಲಿಯ ಸಂಸತ್ ಭವನದ ಸಮುಚ್ಛಯದಲ್ಲಿ ಸರ್ವಪಕ್ಷ ಸಭೆಯನ್ನು ಆಯೋಜಿಸಿತ್ತು. ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಭಯೋತ್ಪಾದಕ ದಾಳಿ ಕುರಿತಂತೆ ಸರ್ವಪಕ್ಷಗಳು ತಮ್ಮ ಕಳವಳವನ್ನು ವ್ಯಕ್ತಪಡಿಸಿದ್ದು, ಭಯೋತ್ಪಾದನೆ ವಿರುದ್ಧ ಸರ್ಕಾರ ಕೈಗೊಳ್ಳಲಿರುವ ಕ್ರಮಗಳ ಬಗ್ಗೆ ತಮ್ಮ ಬೆಂಬಲವನ್ನು ಸೂಚಿಸಿವೆ ಎಂದರು. ಪಹಲ್ಗಾಮ್‌ನಲ್ಲಿ ನಡೆದ ದಾಳಿ ಕುರಿತಂತೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಭೆಯ ಗಮನಕ್ಕೆ ತಂದರು. ಹಾಗೂ ಬದ್ಧತೆ ಕುರಿತು ಸಂಪುಟ ಸಭೆಯಲ್ಲಿ ಕೈಗೊಂಡಿರುವ ಸರ್ಕಾರ ನಿರ್ಧಾರಗಳನ್ನು ವಿವರಿಸಿದರು ಎಂದು ಕಿರಣ್ ರಿಜಿಜು ತಿಳಿಸಿದರು.

ಧ್ವನಿ: ಕಿರಣ್ ರಿಜಿಜು

*******

ಪಹಲ್ಗಾಮ್ ಭಯೋತ್ಪಾದಕ ದಾಳಿ ಖಂಡಿಸಿ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿನ ಹಲವಾರು ಮಾರುಕಟ್ಟೆಗಳನ್ನು ವ್ಯಾಪಾರಿಗಳು ಇಂದು ಬಂದ್ ಮಾಡಿ ತಮ್ಮ ಪ್ರತಿಭಟನೆಯನ್ನು ವ್ಯಕ್ತಪಡಿಸಿದ್ದಾರೆ. ಚಾಂದಿನಿ ಚೌಕ್‌ನಿಂದ ಕೆಂಪುಕೋಟೆವರೆಗೆ ಸಂತಾಪ ಮೆರವಣಿಗೆ ನಡೆಯಿತು. ಅಖಿಲ ಭಾರತ ವ್ಯಾಪಾರಿಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಮತ್ತು ದೆಹಲಿಯ ಬಿಜೆಪಿ ಸಂಸದ ಪ್ರವೀಣ್ ಖಂಡೇಲ್‌ಲಾಲ್ ರಾಷ್ಟ್ರ ರಾಜಧಾನಿಯಲ್ಲಿಂದು ಬಂದ್ ಆಚರಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ದೆಹಲಿಯಲ್ಲಿ ೮ ಲಕ್ಷಕ್ಕೂ ಹೆಚ್ಚು ವ್ಯಾಪಾರಿಗಳಿದ್ದು, ೯೦೦ಕ್ಕೂ ಹೆಚ್ಚು ಅಂಗಡಿಗಳನ್ನು ಸಂಪೂರ್ಣವಾಗಿ ಮುಚ್ಚಲಾಗಿದೆ ಎಂದು ಅವರು ತಿಳಿಸಿದ್ದಾರೆ.

*******

ಜಮ್ಮು ಮತ್ತು ಕಾಶ್ಮೀರದ ಬಂಡೀಪೋರ ಜಿಲ್ಲೆಯಲ್ಲಿಂದು ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದ ನಂತರ ಭಾರತೀಯ ಸೇನೆ ಹಾಗೂ ಜಮ್ಮು ಮತ್ತು ಕಾಶ್ಮೀರದ ಪೊಲೀಸರು ಜಂಟಿ ಕಾರ್ಯಾಚರಣೆಯನ್ನು ಬಾಜಿಪೋರಾ ಕುಲ್ನಾರ್ ಅರಣ್ಯ ಪ್ರದೇಶದಲ್ಲಿ ತೀವ್ರಗೊಳಿಸಿದ್ದಾರೆ. ಇದಕ್ಕೂ ಮುನ್ನ ಭಯೋತ್ಪಾದಕರು ದಟ್ಟ ಅರಣ್ಯ ಪ್ರದೇಶದಲ್ಲಿ ಅಡಗಿ ಕುಳಿತಿದ್ದಾರೆ ಎಂಬ ಖಚಿತ ಗುಪ್ತಚರ ಮಾಹಿತಿ ಹಿನ್ನೆಲೆಯಲ್ಲಿ ಭದ್ರತಾ ಪಡೆಗಳು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದಾಗ ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆಯಿತು. ಶಂಕಿತ ಪ್ರದೇಶದ ಸುತ್ತಮುತ್ತ ಸೇನೆ ಹಾಗೂ ಪೊಲೀಸ್ ಪಡೆಗಳು ಕಾರ್ಯಾಚರಣೆಗೆ ಮುಂದಾದಾಗ ಅಡಗು ತಾಣದಲ್ಲಿದ್ದ ಭಯೋತ್ಪಾದಕರು ಗುಂಡಿನ ಮಳೆಗರೆದರು. ಇದರಿಂದಾಗಿ ಭಾರೀ ಪ್ರಮಾಣದಲ್ಲಿ ಗುಂಡಿನ ಚಕಮಕಿ ನಡೆಯಿತು. ಈ ಘಟನೆಯಲ್ಲಿ ಸಾವು-ನೋವು ಸಂಭವಿಸಿರುವ ಬಗ್ಗೆ ಇದುವರೆಗೂ ವರದಿಯಾಗಿಲ್ಲ. ಕಾರ್ಯಾಚರಣೆ ಮುಂದುವರೆದಿದೆ.

*******

ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸಕ್ಸೆನಾ ಅವರು ದಾಖಲಿಸಿದ್ದ ಮಾನನಷ್ಟ ಮೊಕದ್ದಮೆ ಸಂಬಂಧ ಪರಿಸರವಾದಿ ಮೇಧಾ ಪಾಟ್ಕರ್ ಅವರನ್ನು ದೆಹಲಿ ಪೊಲೀಸರು ಇಂದು ಬಂಧಿಸಿದ್ದಾರೆ. ದೆಹಲಿ ನ್ಯಾಯಾಲಯ ಈ ಪ್ರಕರಣ ಸಂಬಂಧ ಮೇಧಾ ಪಾಟ್ಕರ್ ಅವರಿಗೆ ಜಾಮೀನು ರಹಿತ ವಾರೆಂಟ್ ಹೊರಡಿಸಿದೆ. ಇಂದು ಬೆಳಗ್ಗೆ ದೆಹಲಿ ಪೊಲೀಸರು ಬಂಧಿಸಿರುವ ಮೇಧಾ ಪಾಟ್ಕರ್ ಅವರನ್ನು ಸಂಜೆ ಒಳಗೆ ನ್ಯಾಯಾಲಯದ ಮುಂದೆ ಹಾಜರುಪಡಿಸುವ ಸಾಧ್ಯತೆಗಳಿವೆ.

*******

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ತಮಿಳುನಾಡಿಗೆ ತಲುಪಿದ್ದಾರೆ. ವಿಶ್ವವಿದ್ಯಾಲಯಗಳು ಖಾಸಗಿ ಕಾಲೇಜುಗಳು, ಕೇಂದ್ರ ಮತ್ತು ರಾಜ್ಯಗಳ ಉಪಕುಲಪತಿಗಳ ಎರಡು ದಿನಗಳ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ. ಉಪರಾಷ್ಟ್ರಪತಿ ಅವರು ಇಂದು ಸಂಜೆ ಮುತ್ತಿನ ಮೂಡು ತೋಡ ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಮಾಡಲಿದ್ದಾರೆ. ಅಲ್ಲದೇ, ಅವರು ಮಧುಮಲೈ ಹುಲಿ ಸಂರಕ್ಷಣಾ ಮತ್ತು ಆನೆಗಳ ಶಿಬಿರಕ್ಕೆ ಭೇಟಿ ನೀಡುವ ಸಾಧ್ಯತೆ ಇದೆ. ಕೊಯಮತ್ತೂರಿನಲ್ಲಿ ಭಾನುವಾರ ನಡೆಯಲಿರುವ ತಮಿಳುನಾಡು ಕೃಷಿ ವಿಶ್ವವಿದ್ಯಾಲಯದಲ್ಲಿ ಏರ್ಪಡಿಸಿರುವ ಕೃಷಿ ಸಮ್ಮೇಳನದಲ್ಲಿ ಪಾಲ್ಗೊಂಡ ನಂತರ ದೆಹಲಿಗೆ ವಾಪಸ್ಸಾಗಲಿದ್ದಾರೆ.

*******

ಇಂದು ವಿಶ್ವ ಮಲೇರಿಯಾ ದಿನ. ಮಲೇರಿಯಾ ಬಗ್ಗೆ ಜಾಗೃತಿ ಮೂಡಿಸಲು ಮತ್ತು ರೋಗವನ್ನು ನಿಯಂತ್ರಿಸುವ ಸಲುವಾಗಿ ವಿಶ್ವ ಆರೋಗ್ಯ ಸಂಸ್ಥೆ-ಡಬ್ಲ್ಯೂಎಚ್‌ಒ ಹಲವು ಜಾಗತಿಕ ಉಪಕ್ರಮಗಳನ್ನು ಕೈಗೆತ್ತಿಕೊಂಡಿದೆ. ಈ ಹಿನ್ನೆಲೆಯಲ್ಲಿ ವಿಶ್ವಾದ್ಯಂತ ಹಲವಾರು ಕಾರ್ಯಕ್ರಮಗಳು ನಡೆಯುತ್ತಿವೆ. ಈ ವರ್ಷದ ಘೋಷವಾಕ್ಯ "ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ: ಮರುಹೂಡಿಕೆ ಮಾಡಿ, ಮರುಕಲ್ಪಿಸಿಕೊಳ್ಳಿ, ಪುನರುಜ್ಜೀವನಗೊಳಿಸಿ" ಎಂಬುದಾಗಿದೆ.

*******

ಪ್ರಸಕ್ತ ವರ್ಷದ ಫೆಬ್ರವರಿಯಲ್ಲಿ ಇಎಸ್‌ಐ ಯೋಜನೆಯಡಿ ೧೫ ಲಕ್ಷದ ೪೩ ಸಾವಿರದ ನೂತನ ಕಾರ್ಮಿಕರು ನೋಂದಾಯಿಸಿಕೊಂಡಿದ್ದಾರೆ ಎಂದು ಕೇಂದ್ರ ಕಾರ್ಮಿಕ ಸಚಿವಾಲಯ ಮಾಹಿತಿ ನೀಡಿದೆ. ಇವರದಲ್ಲಿ ೭.೩೮ ಲಕ್ಷ ಉದ್ಯೋಗಿಗಳು ೨೫ ವರ್ಷಕ್ಕಿಂತ ಕಡಿಮೆ ವಯೋಮಾನದವರಾಗಿದ್ದಾರೆ ಸಚಿವಾಲಯ ತಿಳಿಸಿದೆ. ಫೆಬ್ರವರಿ ತಿಂಗಳಲ್ಲಿ ಇಎಸ್‌ಐ ಯೋಜನೆ ವ್ಯಾಪ್ತಿಯಲ್ಲಿ ಸಾಮಾಜಿಕ ಭದ್ರತೆ ಒದಗಿಸುವ ನಿಟ್ಟಿನಲ್ಲಿ ೨೩ ಸಾವಿರಕ್ಕೂ ಹೆಚ್ಚು ಹೊಸ ಸಂಸ್ಥೆಗಳನ್ನು ಸೇರ್ಪಡೆ ಮಾಡಿಕೊಳ್ಳಲಾಗಿದೆ ಎಂದು ಇಎಸ್‌ಐಸಿ ತಿಳಿಸಿದೆ.

*******

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ಸಂಜೆ ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಅಂಕಗಳಿಕೆಯ ಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲಿ ಇರುವ ಉಭಯ ತಂಡಗಳಿಗೆ ಇಂದಿನ ಪಂದ್ಯ ಮಾಡು ಇಲ್ಲ ಮಡಿ ಎಂಬಂತಾಗಿದೆ. ಇದಕ್ಕು ಮುನ್ನ ನಿನ್ನೆ ರಾತ್ರಿ ಬೆಂಗಳೂರಿನ ಚಿನ್ನಸ್ವಾಮಿ ಕೀಡಾಂಗಣದಲ್ಲಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ರಾಜಸ್ಥಾನ್ ರಾಯಲ್ಸ್ ತಂಡವನ್ನು ೧೧ ರನ್‌ಗಳಿಂದ ಮಣಿಸಿ, ಗೆಲುವಿನ ನಗೆ ಬೀರಿದೆ.

ಮೊದಲು ಬ್ಯಾಟ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ೨೦೫ ರನ್‌ಗಳಿಸಿ, ರಾಜಸ್ಥಾನ್ ರಾಯಲ್ಸ್ ಗೆಲುವಿಗೆ ೨೦೬ ರನ್‌ಗಳ ಗುರಿ ನೀಡಿತ್ತು. ಗೆಲುವಿನ ಗುರಿ ಬೆನ್ನತ್ತಿದ ರಾಜಸ್ಥಾನ್ ರಾಯಲ್ಸ್ ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್‌ಗಳ ನಷ್ಟಕ್ಕೆ ಕೇವಲ ೧೯೪ ರನ್ ಗಳಿಸಲಷ್ಟೇ ಶಕ್ತವಾಯಿತು.

*******

ಎರಡನೇ ಏಷ್ಯನ್ ಯೋಗಾಸನ ಚಾಂಪಿಯನ್‌ಶಿಪ್ ಪಂದ್ಯಾವಳಿಗಳು ನವದೆಹಲಿಯ ಇಂದಿರಾಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಇಂದಿನಿಂದ ಆರಂಭವಾಗಲಿವೆ. ಮೂರು ದಿನಗಳ ಯೋಗಾಸನ ಭಾರತ್ ಪಂದ್ಯಾವಳಿ ಇದೇ ೨೭ರವರೆಗೆ ನಡೆಯಲಿದೆ. ೨೧ ಏಷ್ಯನ್ ರಾಷ್ಟ್ರಗಳ ಸುಮಾರು ೧೭೦ ಅಥ್ಲೇಟ್‌ಗಳು ಭಾಗವಹಿಸಲಿದ್ದು ಅವರೊಂದಿಗೆ ಹಲವಾರು ತಾಂತ್ರಿಕ ಅಧಿಕಾರಿಗಳು, ಟೀಮ್ ಮ್ಯಾನೇಜರ್‌ಗಳು ಮತ್ತು ತರಬೇತಿದಾರರು ಪಾಲ್ಗೊಳ್ಳಲಿದ್ದಾರೆ. ಸ್ಪರ್ಧಾತ್ಮಕ ಜಾಗತಿಕ ಕ್ರೀಡೆ ಎಂಬುದಾಗಿ ಯೋಗಾಸನವನ್ನು ಪ್ರೋತ್ಸಾಹಿಸಲು ಕೇಂದ್ರ ಸರ್ಕಾರ ಕೈಗೊಂಡಿರುವ ಪ್ರಯತ್ನಗಳ ಭಾಗವಾಗಿ ಈ ಚಾಂಪಿಯನ್‌ಶಿಪ್ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಯೋಗಾಭ್ಯಾಸಕ್ಕೆ ಅವಕಾಶ ಕಲ್ಪಿಸಿದ ನಂತರ ಇದೀಗ ಯೋಗಾಸನಕ್ಕೆ ಕ್ರೀಡಾ ಸ್ಥಾನಮಾನ ದೊರೆತಿದೆ ಎಂದು ವಿಶ್ವ ಯೋಗಾಸನದ ಪ್ರಧಾನ ಕಾರ್ಯದರ್ಶಿ ಡಾ.ಜಯದೀಪ್ ಆರ್ಯ ಹೇಳಿದ್ದಾರೆ.

****END***